# ಚಿಕ್ಕಮಗಳೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ

(ಕರ್ನಾಟಕ ಸರಕಾರದ ಸ್ವಾಯತ್ತ ಸಂಸ್ಥೆ)

**ಅರಳಗುಪ್ಪೆ ಮಲ್ಲೇಗೌಡ ಜಿಲ್ಲಾ ಆಸ್ಪತ್ರೆ, ಆಜಾದ್ ಪಾರ್ಕ ಹತ್ತಿರ, ಚಿಕ್ಕಮಗಳೂರು – 577101.**

ದೂರವಾಣಿ ಸಂಖ್ಯೆ: 08262-2953478. ಇ-ಮೇಲ್: directorcims2020@gmail.com


---

ಸಂಖ್ಯೆ: CHIMS/DR / 09 /2021-22 ದಿನಾಂಕ: 28.10.2021

## ಅಭ್ಯರ್ಥಿಗಳ ಮಾಹಿತಿಗಾಗಿ

ಚಿಕ್ಕಮಗಳೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿನ ವಿವಿಧ ಪದನಾಮಗಳಲ್ಲಿ ವಿವಿಧ ವಿಭಾಗಗಳ ಬೋಧಕ ಹುದ್ದೆಗಳ ನೇರನೇಮಕಾತಿಗಾಗಿ ಅರ್ಜಿಗಳನ್ನು ವಿವಿಧ ಪತ್ರಿಕೆಗಳಲ್ಲಿ ಈಗಾಗಲೇ ಪ್ರಕಟಿಸಿ ಆಹ್ವಾನಿಸಲಾಗಿದ್ದು, ನಿಗದಿತ ದಿನಾಂಕದೊಳಗೆ ಅರ್ಜಿಗಳನ್ನು ಸಲ್ಲಿಸಿದ ಅಭ್ಯರ್ಥಿಗಳಿಗೆ 10.11.2021 ರಿಂದ 13.11.2021 ರವರೆಗೆ ನೇರನೇಮಕಾತಿ ಸಂದರ್ಶನವನ್ನು ಆಡಳಿತ ವಿಭಾಗ, ಚಿಕ್ಕಮಗಳೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ಹಳೇ ಪಿ.ಡಬ್ಲ್ಯೂ.ಡಿ ಕಛೇರಿ ಆವರಣ) ಆಜಾದ್ ವೃತ್ತ, ಅರಳಗುಪ್ಪೆ ಮಲ್ಲೇಗೌಡ ಜಿಲ್ಲಾ ಆಸ್ಪತ್ರೆ ಎದುರು, ಚಿಕ್ಕಮಗಳೂರು ಇಲ್ಲಿ ನಡೆಸಲಾಗುವುದು. ವಿಭಾಗವಾರು ಸಂದರ್ಶನದ ದಿನಾಂಕಗಳನ್ನು ಶೀಘ್ರದಲ್ಲಿ ಸಂಸ್ಥೆಯ ಅಧಿಕೃತ ವೆಬ್‌ಸೈಟ್ https://cimschikkamagaluru.karnataka.gov.in ಹಾಗೂ ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯದ ವೆಬ್‌ಸೈಟ್ https://dme.karnataka.gov.in ನಲ್ಲಿ ಪ್ರಕಟಿಸಲಾಗುವುದು.

**ತಿದ್ದುಪಡಿ :** ಅಂಗರಚನಾ ಶಾಸ್ತ್ರ (ಅನಾಟಮಿ) ಮತ್ತು ಜೀವ ರಸಾಯನಶಾಸ್ತ್ರ (ಬಯೋಕೆಮಿಸ್ಟ್ರಿ) ವಿಭಾಗದ ಪ್ರಾಧ್ಯಾಪಕರ ಹುದ್ದೆಯನ್ನು ನೇರ ನೇಮಕಾತಿ ಪ್ರಕ್ರಿಯೆಯಿಂದ ರದ್ದು ಪಡಿಸಲಾಗಿದೆ. ಸದರಿ ಹುದ್ದೆಗಳಿಗೆ ಈಗಾಗಲೇ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ ಸಂದರ್ಶನವನ್ನು ನಡೆಸಲಾಗುವುದಿಲ್ಲ ಎಂದು ತಮ್ಮ ಗಮನಕ್ಕೆ ತರಲಾಗಿದೆ.

ಸಹಿ/-

ಡೀನ್ ಹಾಗೂ ನಿರ್ದೇಶಕರು
ಚಿಕ್ಕಮಗಳೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ
ಚಿಕ್ಕಮಗಳೂರು